ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 29–12–2020

# ಪತ್ರಿಕಾ ಪ್ರಕಟಣೆ

## ವಿದೇಶದ ಉದ್ಯೋಗಾವಕಾಶದ ಮಾಹಿತಿ ಹಾಗೂ ಕೌಶಲ್ಯ ಅಭಿವೃದ್ಧಿಗಾಗಿ ಅಂತರರಾಷ್ಟ್ರೀಯ ವಲಸೆ ಕೇಂದ್ರ–ಕರ್ನಾಟಕ

**ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):**

ರಾಜ್ಯದಿಂದ ಉದ್ಯೋಗ ಹರಸಿ ವಿದೇಶಗಳಿಗೆ ಹೋಗುವ ಜನರಿಗಾಗಿ ಉದ್ಯೋಗಾವಕಾಶ ಮಾರ್ಗಗಳನ್ನು ಸ್ಥಾಪಿಸುವುದು ಹಾಗೂ ಅಂತರರಾಷ್ಟ್ರೀಯ ವಲಸೆಯನ್ನು ಸುರಕ್ಷಿತ ಮತ್ತು ಕ್ರಮಬದ್ಧಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ನಿಯಮಿತವತಿಯಿಂದ ಅಂತರರಾಷ್ಟ್ರೀಯ ವಲಸೆ ಕೇಂದ್ರವನ್ನು ಸ್ಥಾಪಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಉನ್ನತ ಶಿಕ್ಷಣ, ಐಟಿ,ಬಿಟಿ, ವಿಜ್ಞಾನ ಹಾಗೂ ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಡಾ: ಸಿಎನ್. ಅಶ್ವಥ್ ನಾರಾಯಣ ತಿಳಿಸಿದರು.

ಇಂದು ನಗರದ ಡೈರಿ ವೃತ್ತದ ಕಲ್ಯಾಣ ಸುರಕ್ಷಾ ಭವನದ ಆವರಣದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಅನುಷ್ಠಾನಗೊಳಿಸಲಾಗಿರುವ ಅಂತರರಾಷ್ಟ್ರೀಯ ವಲಸೆ ಕೇಂದ್ರ ಹಾಗೂ ಕಚೇರಿಯನ್ನು ಉದ್ಘಾಟಿಸಿ ಮಾತಾನಾಡಿದ ಅವರು ಕೌಶಲ್ಯ ತರಬೇತಿ ಪಡೆದ ಯುವಜನತೆಗೆ ವಿದೇಶಗಳಲ್ಲಿ ಸುಸ್ಥಿರ ಉದ್ಯೋಗವಕಾಶಗಳನ್ನು ಸೃಷ್ಟಿಸುವ ಉದ್ದೇಶದಿಂದ ಅಂತರಾಷ್ಟ್ರೀಯ ವಲಸೆ ಕೇಂದ್ರ–ಕರ್ನಾಟಕ (ಐಎಂಸಿ–ಕೆ) ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ ಎಂದು ಹೇಳಿದರು.

ನಿಗಮವು ಈ ಕುರಿತು ನೀತಿ ಮತ್ತು ನಿಯಮಗಳನ್ನು ರೂಪಿಸುವುದರೊಂದಿಗೆ, ಗುಣಮಟ್ಟದ ಮಾನದಂಡಗಳನ್ನು ಸ್ಥಾಪಿಸುವುದು ಹಾಗೂ ಕೌಶಲ್ಯ ಅಭಿವೃದ್ಧಿಯಲ್ಲಿ ಸಂಶೋಧನೆಗಾಗಿ ಪ್ರೋತ್ಸಾಹ ನೀಡುವುದರ ಜೊತೆಗೆ ಕೌಶಲ್ಯ ಅಭಿವೃದ್ಧಿ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವ ಪಾಲುದಾರರೊಂದಿಗೆ ಸಮನ್ವಯ ಸಾಧಿಸುವ ಗುರಿಯನ್ನು ಹೊಂದಿರುವುದು ಶ್ಲಾಘನೀಯ ಎಂದರು.

ಕೆ.ವಿ.ಟಿ.ಎಸ್.ಡಿ.ಸಿ.ಯು 15 ವಿದೇಶಿ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ದೂರವಾಣಿ ಮತ್ತು ಇ-ಮೇಲ್ ಮುಖಾಂತರ ಸಂಪರ್ಕಿಸಿ ಪ್ರಸ್ತುತ ಲಭ್ಯವಿರುವ ವಿವಿಧ ಕ್ಷೇತ್ರಗಳ ಉದ್ಯೋಗವಕಾಶಗಳ ಬಗ್ಗೆ ಮಾಹಿತಿ ಪಡೆಯಲಾಗಿದೆ.

ಕರ್ನಾಟಕದ 1 ಸಾವಿರ ದಾದಿಯರಿಗೆ ಬೇಡಿಕೆ ಇದ್ದು, ನೇಮಕ ಮಾಡಲು ಹೆಲ್ತ್ ಎಜುಕೇಷನ್ ಇಂಗ್ಲೆಂಡ್ (ಹೆಚ್.ಇ.ಇ.), ನ್ಯಾಷನಲ್ ಹೆಲ್ತ್ ಸರ್ವಿಸಸ್ (ಎನ್.ಹೆಚ್.ಎಸ್)-ಯುನೈಟೆಡ್ ಕಿಂಗ್‌ಡಮ್‌ನೊಂದಿಗೆ ಕರಾರು ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದರು.

ಪೀಣ್ಯ ಕೈಗಾರಿಕೆಗಳು ಐಟಿಐ ವಿದ್ಯಾರ್ಥಿಗಳಿಗೆ ತರಬೇತಿ ಹಾಗೂ ಉದ್ಯೋಗ ಕಲ್ಪಿಸಲು ಮುಂದೆ ಬಂದಿದೆ ಎಂದ ಉಪ ಮುಖ್ಯಮಂತ್ರಿಗಳು, ನಾವು ಪಡೆಯುವ ಶಿಕ್ಷಣ-ಕೌಶಲ್ಯದ ಸಾಧನೆ ಮತ್ತು ಸಾರ್ಥಕತೆಯನ್ನು ನಮ್ಮ ಉದ್ಯೋಗದ ಮೂಲಕ ಸಮಾಜಕ್ಕೆ ಅರ್ಪಣೆ ಮಾಡಬೇಕೆಂದರು.

ಉದ್ಯಮಶೀಲತೆ ಹಾಗೂ ಹೊಸ ಕ್ಷೇತ್ರಗಳಲ್ಲಿ ಉನ್ನತ ಮಟ್ಟದ ತರಬೇತಿ ನೀಡುವ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳಬೇಕು. ನಮ್ಮ ಸಾಧನೆಯನ್ನು ಅಕ್ಕ ಪಕ್ಕದ ರಾಜ್ಯದಲ್ಲಿ ನೋಡಬಾರದು. ವಿಶ್ವಮಟ್ಟದಲ್ಲಿ ನೋಡಬೇಕು. ಪ್ರಾಧಿಕಾರಕ್ಕೆ ಸರ್ಕಾರದಿಂದ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದರು.

ಕೌಶಲ್ಯ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಕೆ.ರತ್ನಪ್ರಭ ಅವರು ಮಾತನಾಡಿ, ಅನೇಕ ಕಂಪನಿಗಳು ಹಾಗೂ ಅಂತರಾಷ್ಟ್ರೀಯ ಸಂಸ್ಥೆಗಳಿಂದ ಬೇಡಿಕೆ ಇದ್ದು, ಸುಮಾರು 50 ಸಾವಿರ ಜನರಿಗೆ ಉದ್ಯೋಗ ಕಲ್ಪಿಸಿ ಕೊಡಲಾಗುವುದು ಎಂದರು.

ವಿಧಾನಸಭಾ ಸದಸ್ಯರಾದ ಉದಯ ಗರುಡಾಚಾರ್ ಮಾತನಾಡಿ ಪ್ರಾಧಿಕಾರವು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ನಿರುದ್ಯೋಗಿ ಯುವಕ-ಯುವತಿಯರು ಉದ್ಯೋಗ ಪಡೆಯಲು ಅನುಕೂಲವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ. ಎಸ್. ಸೆಲ್ವ ಕುಮಾರ್, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರಾದ ಡಾ. ಕೆ.ವಿ ತ್ರಿಲೋಕಚಂದ್ರ ಉಪಸ್ಥಿತರಿದ್ದರು. ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅಶ್ವಿನ್ ಗೌಡ ಪ್ರಾಸ್ತಾವಿಕ ಮಾತನಾಡಿದರು.

## ಧರ್ಮಸ್ಥಳಕ್ಕೆ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಹಣಮಂತ ಕೊಟಬಾಗಿ ಭೇಟಿ; 5 ಲಕ್ಷ ರೂ. ಅನುದಾನ ಹಸ್ತಾಂತರ

**ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):**

ಬೆಂಗಳೂರು, ಡಿ- **29:**ಕರ್ನಾಟಕ ರಾಜ್ಯ ಸರಕಾರದ ಮದ್ಯಪಾನ ಸಂಯಮ ಮಂಡಳಿಯ ನೂತನ ಅಧ್ಯಕ್ಷರಾಗಿ ನೇಮಕಗೊಂಡಿರುವ ಶ್ರೀ ಹಣಮಂತ ತಮ್ಮಾಜಿ ಕೊಟಬಾಗಿ ಇವರು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಗಳಾದ

ಡಾ| ಡಿ. ವೀರೇಂದ್ರ ಹೆಗ್ಗಡೆಯವರನ್ನು ಶ್ರೀ ಕ್ಷೇತ್ರ ಧರ್ಮಸ್ಥಳದಲ್ಲಿ ಭೇಟಿ ನೀಡಿ ಆಶೀರ್ವಾದ ಪಡೆದರು. ಇದೇ ಸಂದರ್ಭದಲ್ಲಿ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಬೆಳ್ತಂಗಡಿ ಮತ್ತು ಸಂಯಮ ಮಂಡಳಿಯ ಸಹಯೋಗದೊಂದಿಗೆ ಸಮುದಾಯ ಮದ್ಯವರ್ಜನ ಶಿಬಿರಗಳನ್ನು ನಡೆಸಲು ಪೂರಕವಾಗಿ ಚರ್ಚೆ ನಡೆಸಲಾಯಿತು. ಮದ್ಯವರ್ಜನ ಶಿಬಿರ ಸಂಯೋಜನೆಗೆ ಸರಕಾರದಿಂದ ಅನುಮೋದಿತ ಕ್ರಿಯಾಯೋಜನೆಯಲ್ಲಿ ನಿಗದಿಪಡಿಸಿದಂತೆ ರೂ.೫ ಲಕ್ಷ ಮೊತ್ತವನ್ನು ಮೊತ್ತವನ್ನು ವೇದಿಕೆಗೆ ಅನುದಾನವಾಗಿ ನೀಡಿದರು.

ಪ್ರಸ್ತುತ ವಿದ್ಯಮಾನದಲ್ಲಿ ಮಾದಕ ವಸ್ತುಗಳ ಹಾವಳಿ ಬಹಳಷ್ಟು ಇರುವುದರಿಂದ ಇಂದು ಸಮಾಜದಲ್ಲಿ ವಿವಿಧ ಪ್ರಕಾರದ ಮಾದಕ ವಸ್ತುಗಳನ್ನು ಬಳಕೆ ಮಾಡುವ ವ್ಯಸನಿಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಮುಂದಕ್ಕೆ ಮಂಡಳಿಯ ಹೆಸರನ್ನು 'ವ್ಯಸನಮುಕ್ತ ಸಲಹಾ ಮಂಡಳಿ' ಈ ರೀತಿಯ ಯಾವುದೇ ಹೆಸರು ಇಂದಿನ ಕಾಲಮಾನಕ್ಕೆ ಸರಿಯಾಗಿ ಮರುನಾಮಕರಣ ಮಾಡುವ ಅವಶ್ಯಕತೆ ಇದೆ ಎಂದು ಅಭಿಪ್ರಾಯ ವ್ಯಕ್ತಪಡಿಸಲಾಯಿತು. ರಾಜ್ಯಾದ್ಯಂತ ಮಾಹಿತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹೆಚ್ಚುಹೆಚ್ಚಾಗಿ ನಡೆಸಲಾಗುವುದೆಂದು ಮಂಡಳಿಯ ಅಧ್ಯಕ್ಷರು ಅಭಿಪ್ರಾಯ ಪಟ್ಟರು.

ಕರ್ನಾಟಕ ರಾಜ್ಯದಲ್ಲಿರುವ ಜನಜಾಗೃತಿ ವೇದಿಕೆಯ ಪದಾಧಿಕಾರಿಗಳ ಜೊತೆಯಲ್ಲಿ ಚರ್ಚಿಸಿಕೊಂಡು ತಾಲೂಕು ಮಟ್ಟದಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಯುವಜನತೆಗೆ ನೀಡಬೇಕಾಗಿದೆ. ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕಿರುಚಿತ್ರಗಳನ್ನು ರಚಿಸಿದ್ದು, ವ್ಯಸನದ ಭೀಕರತೆಯನ್ನು ಜನಮಾನಸದಲ್ಲಿ ಬಿತ್ತರಿಸಿದಾಗ ವ್ಯಾಪಕ ಜಾಗೃತಿ ಬರಲು ಸಾಧ್ಯ. ಮಂಡಳಿಯ ಹೆಸರು ಬದಲಾವಣೆ ಪ್ರಸ್ತಾಪ ಸ್ವಾಗತಾರ್ಹವಾಗಿದೆ. ಈ ನಿಟ್ಟಿನಲ್ಲಿ ಸರಕಾರಕ್ಕೂ ಪತ್ರ ಬರೆಯಲಿದ್ದೇನೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಡಾ| ಡಿ. ವೀರೇಂದ್ರ ಹೆಗ್ಗಡೆಯವರು ಅಭಿಪ್ರಾಯ ಪಟ್ಟರು.

ಕೋವಿಡ್ ಸಮಸ್ಯೆಯಿಂದ ಕಳೆದ ೬ ತಿಂಗಳಿನಿಂದ ಮದ್ಯವರ್ಜನ ಶಿಬಿರಗಳನ್ನು ನಿಲ್ಲಿಸಲಾಗಿದೆ. ಮುಂದಿನ ದಿನಗಳಲ್ಲಿ ಕೋವಿಡ್ ಮುಂಜಾಗ್ರತಾ ಕ್ರಮ ಅನುಸರಿಸಿಕೊಂಡು ಶಿಬಿರ ನಡೆಸುವ ಬಗ್ಗೆ ಯೋಚಿಸಲಾಗುವುದು. ಲಾಕ್‌ಡೌನ್ ಸಂದರ್ಭದಲ್ಲಿ ಜನಜಾಗೃತಿ ವೇದಿಕೆಯ ಮೂಲಕ ಸರ್ವೆ ನಡೆಸಿ ಅಭಿಪ್ರಾಯ ಸಂಗ್ರಹಿಸಿದಾಗ ಶೇ.೮೫ ಮಂದಿ ಪಾನ ನ಼ಿಷೇಧದಿಂದ ಕುಟುಂಬಗಳಲ್ಲಿ ಸಂತೋಷ, ಸಮಾಜದಲ್ಲಿ ಶಾಂತಿ, ನೆಮ್ಮದಿ ಸಾಧ್ಯವಾಗಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ. ಈ ವಿಚಾರದಂತೆ ಮುಂದಕ್ಕೆ ವ್ಯಸನಮುಕ್ತ ಕುಟುಂಬ ನಿರ್ಮಾಣದ ಕಲ್ಪನೆಯೊಂದಿಗೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ(ರಿ.) ಕಾರ್ಯನಿರ್ವಾಹಕ ನಿರ್ದೇಶಕರಾದ ಡಾ| ಎಲ್.ಹೆಚ್. ಮಂಜುನಾಥ್‌ರವರು ಅಭಿಪ್ರಾಯ ಪಟ್ಟರು. ಈ ಸಂದರ್ಭದಲ್ಲಿ ಸಂಯಮ ಮಂಡಳಿಯ ಕಾರ್ಯದರ್ಶಿಗಳಾದ ಶ್ರೀ ಶಂಕರಪ್ಪ, ಮತ್ತು ಜನಜಾಗೃತಿ ವೇದಿಕೆ ಪ್ರಾದೇಶಿಕ ಕಛೇರಿಯ ಪ್ರಾದೇಶಿಕ ನಿರ್ದೇಶಕರಾದ ಶ್ರೀ ವಿವೇಕ್ ವಿ. ಪಾಸ್, ಯೋಜನಾಧಿಕಾರಿಗಳಾದ ಶ್ರೀ ಮೋಹನ್, ಶ್ರೀ ಜೈವಂತ್ ಪಟಗಾರ್ ಉಪಸ್ಥಿತರಿದ್ದರು.

## ಹೊಸ ವರ್ಷದ ಉಡುಗೊರೆ
## ಬಿದಿರಿನ ಹಣ್ಣಿನ ಬುಟ್ಟಿ ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಮಾರಾಟ

**ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):**

ಸಾರ್ವಜನಿಕರು ಹೊಸ ವರ್ಷದ ಆಚರಣೆಯ ಸಂದರ್ಭದಲ್ಲಿ ರೈತರು ಬೆಳೆದ ಹಣ್ಣಗಳನ್ನು ಉಡುಗೊರೆಯಾಗಿ ನೀಡಲು ಸಹಕಾರಿಯಾಗುವಂತೆ ಕರ್ನಾಟಕ ರಾಜ್ಯ ತೋಟಗಾರಿಕೆ ಇಲಾಖೆಯ ಅಂಗಸಂಸ್ಥೆ ತಘಟದ ಬೆಳೆಗಾರರ ಸಹಕಾರಿ ಮಾರಾಟ ಮತ್ತು ಸಂಸ್ಕರಣ ಸಂಘ ನಿಯಮಿತವತಿಯಿಂದ ನಗರದ ಹಾಪ್‌ಕಾಮ್ಸ್‌ಗಳಲ್ಲಿ ಬಿದಿರು ಬುಟ್ಟಿಗಳಲ್ಲಿ ಹಣ್ಣುಗಳನ್ನು ತುಂಬಿರುವ ಉಡುಗೊರೆಗಳನ್ನು ಮಾರಾಟ ಮಾಡಲಾಗುತ್ತದೆ ಎಂದು ಹಾಪ್‌ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

2020 ನೇ ಕ್ಯಾಲೆಂಡರ್ ವರ್ಷ ಕೊನೆಗೊಳ್ಳಲು ಇನ್ನೂ ಕೆಲವು ದಿನಗಳು ಮಾತ್ರ ಬಾಕಿ ಇದೆ. 2021ರ ಹೊಸ ವರ್ಷವನ್ನು ಸ್ವಾಗತಿಸಲು ನಾವೆಲ್ಲರೂ ಉತ್ಸುಕರಾಗಿದ್ದೇವೆ. ಕೋವಿಡ್19 ರ ವೈರಸ್ ಹಾವಳಿಯಿಂದ ಬೆಂಗಳೂರಿನ ಜನತೆ ಚಿಂತಿತರಾಗಿದ್ದಾರೆ. ತಮ್ಮ ಬಂಧುಮಿತ್ರರಿಗೆ ಹೊಸ ವರ್ಷದ ಶುಭಾಶಯಗಳನ್ನು ಕೋರುವ ಸಂದರ್ಭದಲ್ಲಿ ನೆನಪಿನ ಕಾಣಿಕೆಗಳನ್ನು ನೀಡುವುದರ ಬದಲು ಪೌಷ್ಠಿಕಾಂಶ ಭರಿತ ಹಣ್ಣುಗಳ ಬುಟ್ಟಿಯನ್ನು ಕೊಡುವುದು ಸಮಂಜಸವೆನಿಸುತ್ತದೆ.

ಕೋವಿಡ್ –19 ರ ವೈರಾಣು ವಿರುದ್ಧ ಹೋರಾಡುವ ಶಕ್ತಿ ಹೊಂದಿರುವಂತಹ ಹಣ್ಣು ಮತ್ತು ತರಕಾರಿಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬಳಕೆ ಮಾಡುವಂತೆ ಗ್ರಾಹಕರಲ್ಲಿ ಹಾಪ್‌ಕಾಮ್ಸ್ ಸಂಸ್ಥೆ ವಿನಂತಿಸಿದ್ದು, ಹೊಸವರ್ಷವನ್ನು ಸ್ವಾಗತಿಸಲು ಅತ್ಯಮೂಲ್ಯ ಪೌಷ್ಠಿಕಾಂಶಗಳನ್ನು ಹಾಗೂ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ನೆರವಾಗುವ ಬಾಳೆ, ಸೇಬು, ಮೋಸಂಬಿ, ಕಿತ್ತಳೆ, ಕರಬೂಜ, ಸೀಬೆ ಇತ್ಯಾದಿ ಹಣ್ಣುಗಳನ್ನೊಳಗೊಂಡ ಹಣ್ಣಿನ ಬುಟ್ಟಿಯನ್ನು ಆಯ್ದ ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಮಾರಾಟಕ್ಕೆ ಇಡಲಾಗಿದೆ. ಆಸಕ್ತರು ಬಿದಿರಿನ ಹಣ್ಣಿನ ಬುಟ್ಟಿಯನ್ನು ಹಾಪ್‌ಕಾಮ್ಸ್ ಸಂಸ್ಥೆಯಿಂದ ಖರೀದಿಸಿ, ಬಂಧುಮಿತ್ರರಿಗೆ ಕಾಣಿಕೆಯಾಗಿ ಕೊಡುವುದರ ಮೂಲಕ ಹೊಸ ವರ್ಷವನ್ನು ಸ್ವಾಗತಿಸಲು ಸಂಸ್ಥೆ ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ವೈ.ಎಲ್. ಪುಟ್ಟರಾಜು, 9342546450 ನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಜನವರಿ 17 ರಂದು ಮಕ್ಕಳಿಗೆ ಪೋಲೀಯೋ ಲಸಿಕೆ : ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್

**ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):**

ಜನವರಿ 17 ರಂದು ರಾಜ್ಯದ ಸುಮಾರು 66 ಲಕ್ಷ ಮಕ್ಕಳಿಗೆ ಸುರಕ್ಷಿತವಾಗಿ ಪೊಲಿಯೋ ಲಸಿಕೆ ಹಾಕಲು ಎಲ್ಲಾ ರೀತಿಯ ಮುಂಜಾಗ್ರತ ಕ್ರಮ ಕೈಗೊಳ್ಳಲಾಗುತ್ತಿದೆ. 200 ಮಕ್ಕಳಿಗೊಂದು ಬೂತ್ ಹಾಗೂ ಕೋವಿಡ್ –19 ರ ಮಾರ್ಗಸೂಚಿ ಅನ್ವಯ ಲಸಿಕೆ ಹಾಕುವ ಸಿಬ್ಬಂದಿ ಸಂಪೂರ್ಣವಾಗಿ ಸುರಕ್ಷಿತ ಕ್ರಮಗಳನ್ನು ಪಾಲಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್ ತಿಳಿಸಿದರು.

2021 ನೇ ಸಾಲಿನ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮ ಅನುಷ್ಠಾನಗೊಳಿಸಲು ಇಂದು ಜೂಮ್ ಮೂಲಕ ಹಮ್ಮಿಕೊಳ್ಳಲಾಗಿದ್ದ ರಾಜ್ಯ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತಾನಾಡಿದ ಅವರು ಪಲ್ಸ್ ಪೋಲೀಯೋ ರಾಷ್ಟ್ರೀಯ ಲಸಿಕಾ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯ ಇಲಾಖೆಗಳ ಜವಬ್ದಾರಿಗಳು ಹಾಗೂ ಕ್ರಮಗಳ ಕುರಿತು ಚರ್ಚಿಸಿದರು.

ರಾಜ್ಯದಲ್ಲಿ 5 ವರ್ಷ ವಯೋಮಿತಿ ಒಳಗಿನ ಅಂದಾಜು 66 ಲಕ್ಷ  ಮಕ್ಕಳಿದ್ದು ಜನವರಿ 17 ರಂದು ನಡೆಯಲಿರುವ ಪಲ್ಸ್ ಪೋಲೀಯೋ ರಾಷ್ಟ್ರೀಯ ಲಸಿಕಾ ಕಾರ್ಯಕ್ರಮದಡಿ ಎಲ್ಲಾ ಮಕ್ಕಳಿಗೂ ಕಡ್ಡಾಯವಾಗಿ ಲಸಿಕೆ ಹಾಕಲು ಕ್ರಮಕೈಗೊಳ್ಳುವ ಮೂಲಕ ರಾಜ್ಯವನ್ನು ಪಲ್ಸ್ ಪೋಲೀಯೋ ಮುಕ್ತವಾಗಿರಿಸಬೇಕೆಂದು ತಿಳಿಸಿದರು.

ಕೋವಿಡ್ –19 ರ ಸಮಯದಲ್ಲಿ ಈ ಲಸಿಕಾ ಕಾರ್ಯಕ್ರಮ ನಡೆಯುತ್ತಿದ್ದು ಸರ್ಕಾರ ಎಲ್ಲಾ ರೀತಿಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ಲಸಿಕೆ ಹಾಕಿಸಲು ಪೋಷಕರು ತಮ್ಮ ಐದು ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೂ ಯಾವುದೇ ಆತಂಕಕ್ಕೆ ಒಳಗಾಗದೆ ಪೋಲೀಯೋ ಲಸಿಕೆಯನ್ನು ಹಾಕಿಸುವಂತೆ ಮನವಿ ಮಾಡಿದರು.

ರಾಜ್ಯದ ಜಿಲ್ಲಾ ತಾಲ್ಲೂಕು ಹೋಬಳಿ ಕೇಂದ್ರಗಳು ಸೇರಿದಂತೆ ಪ್ರತಿ ಗ್ರಾಮಗಳಲ್ಲೂ ಸುರಕ್ಷಿತ ಲಸಿಕಾ ಕಾರ್ಯಪಡೆ ಮೂಲಕ ಐದು ವರ್ಷದೊಳಗಿನ ಮಕ್ಕಳಿಗೆ ಪೋಲೀಯೋ ಲಸಿಕೆ ಹಾಕುವುದರ ಜೊತೆಗೆ ಲಸಿಕಾ ಕಾರ್ಯಪಡೆಯ ಮೂಲಕ ನಿಗಾವಹಿಸಲಾಗುವುದು ಎಂದು ತಿಳಿಸಿದರು.

ಮಹಾನಗರಪಾಲಿಕೆಗಳು, ನಗರ ಪ್ರದೇಶಗಳಲ್ಲಿರುವ ಕೊಳಚೆ ಪ್ರದೇಶಗಳಲ್ಲಿನ ಮಕ್ಕಳನ್ನೂ, ಕಟ್ಟಡ ಕಾರ್ಮಿಕರ ಮಕ್ಕಳನ್ನು ಹಾಗೂ ವಲಸೆ ಕಾರ್ಮಿಕರ ಮಕ್ಕಳನ್ನು ಗುರುತಿಸಿ ಅಂತಹ ಮಕ್ಕಳಿಗೆ ಪೋಲೀಯೋ ಲಸಿಕೆ ಹಾಕಿಸುವುದರ ಜೊತೆಗೆ ವಿಮಾನ ನಿಲ್ದಾಣ, ರೈಲು ನಿಲ್ದಾಣ ಹಾಗೂ ಬಸ್‌ನಿಲ್ದಾಣಗಳಲ್ಲಿ ಲಸಿಕಾ ಕೇಂದ್ರಗಳನ್ನು ಸ್ಥಾಪಿಸಿ ಪಯಣಿಗರ ಐದು ವರ್ಷದ ಒಳಗಿನ ಮಕ್ಕಳಿಗೆ ಲಸಿಕೆ ಹಾಕಲು ಎಲ್ಲಾ ರೀತಿಯ ಕ್ರಮ ಜರುಗಿಸಬೇಕು ಎಂದು ಮುಖ್ಯ ಕಾರ್ಯದರ್ಶಿಗಳು ಸೂಚಿಸಿದರು.

ಲಸಿಕೆ ಹಾಕುವ ಕೆಲಸದಲ್ಲಿ ವೈದ್ಯಕೀಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯವರು, ಅಂಗನವಾಡಿ ಕಾರ್ಯಕರ್ತರು, ಸ್ವಯಂ ಸೇವಕರು ಹಾಗೂ ಈ ಬಾರಿ ಸ್ತ್ರೀ ಶಕ್ತಿ ಸಂಘಗಳು ಪಾಲ್ಗೊಳ್ಳಲ್ಲಿದ್ದು ಲಸಿಕಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಎಲ್ಲಾ ಕಾರ್ಯಕರ್ತರು ಕೋವಿಡ್ –19 ಮಾರ್ಗಸೂಚಿ ಅನ್ವಯ ಕರ್ತವ್ಯ ನಿರ್ವಹಿಸುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಲ್ಸ್ ಪೋಲಿಯೋ ರಾಷ್ಟ್ರೀಯ ದಿನದ ಲಸಿಕಾ ಯಶಸ್ಸಿಗೆ ಪ್ರಮುಖವಾಗಿ, ವೈದ್ಯಕೀಯ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ವಿದ್ಯುತ್‌ಚ್ಛಕ್ತಿ ಇಲಾಖೆ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳು ಪ್ರಮುಖವಾಗಿ ಕರ್ತವ್ಯನಿರ್ವಹಿಸಬೇಕು ಅಲ್ಲದೆ ಕಾರ್ಯಕ್ರಮದ ಯಶಸ್ಸಿಗೆ ರೋಟರಿ ಸಂಸ್ಥೆ, ಲಯನ್ಸ್ ಸಂಸ್ಥೆಗಳ ನೆರವನ್ನು ಪಡೆಯಬೇಕು. ಕಾರ್ಯಕ್ರಮದ ಯಶಸ್ಸಿಗೆ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ವಿಶೇಷ ಸಮಿತಿಗಳನ್ನು ರಚಿಸಿ ಕಾರ್ಯಕ್ರಮ ಯಶಸ್ವಿಯಾಗುವಂತೆ ನೋಡೊಕೊಳ್ಳಬೇಕು ಎಂದು ಹೇಳಿದರು.

## ಸಂತಾಪ

**ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):**

ವಿಧಾನ ಪರಿಷತ್ತಿನ ಉಪ ಸಭಾಪತಿಯಾಗಿದ್ದ ಎಸ್.ಎಲ್.ಧರ್ಮೇಗೌಡ ಅವರು ಅಕಾಲಿಕವಾಗಿ ಇಂದು ನಮ್ಮನ್ನಗಲಿರುವ ವಿಷಯ ತಿಳಿದು ದಿಗ್ಭ್ರಮೆಯಾಗಿದೆ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಕೆ. ಪ್ರತಾಪ ಚಂದ್ರ ಶೆಟ್ಟಿ ಅವರು ತಿಳಿಸಿದ್ದಾರೆ.

ಸಹಕಾರಿ ಕ್ಷೇತ್ರದಲ್ಲಿ ಗ್ರಾಮೀಣ ಮಟ್ಟದಿಂದ ಅಂತಾರಾಷ್ಟ್ರೀಯ ಮಟ್ಟದವರೆಗೆ ಸಕ್ರಿಯವಾಗಿ ಗುರುತಿಸಿಕೊಂಡಿದ್ದರು. ರಾಜಕೀಯ ಜೀವನದಲ್ಲಿ ಮಂಡ್ಯ ಜಿಲ್ಲಾ ಪಂಚಾಯತಿ ಪ್ರಧಾನ ಹುದ್ದೆಯಿಂದ ಇತ್ತೀಚಿನ ವಿಧಾನ ಪರಿಷತ್ತಿನ ಉಪ ಸಭಾಪತಿವರೆಗೆ ಹಲವು ಹುದ್ದೆಗಳನ್ನು ಅಲಂಕರಿಸಿದ್ದರು.

ಶ್ರೀಯುತರ ಅಕಾಲಿಕ ಮರಣದಿಂದ ವಿಧಾನ ಪರಿಷತ್ ಸದನವು ಒಬ್ಬ ಸರಳ ಸಜ್ಜನಿಕೆ ಹಾಗೂ ಮಿತಭಾಷಿ ವ್ಯಕ್ತಿತ್ವ ಹೊಂದಿದ್ದ ಸದಸ್ಯನನ್ನು ಕಳೆದುಕೊಂಡಂತಾಗಿದೆ. ಅಗಲಿದ ಅವರ ಆತ್ಮಕ್ಕೆ ಸದ್ಗತಿ ಪ್ರಾಪ್ತಿಯಾಗಲಿ ಮತ್ತು ಅವರ ಕುಟುಂಬ ವರ್ಗಕ್ಕೆ, ಅಭಿಮಾನಿಗಳು ಹಾಗೂ ಸ್ನೇಹಿತರ ಬಳಗಕ್ಕೆ ಈ ನೋವನ್ನು ಸಹಿಸುವ ಶಕ್ತಿ ನೀಡಲೆಂದು ಭಗವಂತನನ್ನು ಪ್ರಾರ್ಥಿಸಿದ್ದಾರೆ.

## ಜನವರಿ 3 ರಂದು ಆನ್‌ಲೈನ್ "ಚಿತ್ರಸಂತೆ"

**ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):**

ಕರ್ನಾಟಕ ಚಿತ್ರಕಲಾ ಪರಿಷತ್ ಉನ್ನತ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ 2021ನೇ ಸಾಲಿನ 18ನೆಯ ಚಿತ್ರಸಂತೆಯನ್ನು ಕೋವಿಡ್-19 ಹಿನ್ನಲೆಯಲ್ಲಿ ಜನವರಿ 3 ರಂದು ಆನ್‌ಲೈನ್ ಮುಖಾಂತರ ಹಮ್ಮಿಕೊಂಡಿದೆ. ಕರೋನ ಯೋಧರಿಗೆ ಈ ಬಾರಿಯ ಚಿತ್ರಸಂತೆಯನ್ನು ಸಮರ್ಪಿಸಲಾಗಿದೆ.

ಕೋವಿಡ್-19 ರ ಹಾವಳಿಯಿಂದಾಗಿ ಈ ವರ್ಷ 18 ನೇ ಚಿತ್ರಸಂತೆಯನ್ನು ಆನ್‌ಲೈನ್‌ನಲ್ಲಿ ಒಂದು ತಿಂಗಳುಗಳ ಕಾಲ ಆಯೋಜಿಸಲಾಗುತ್ತದೆ. ಹಾಗೂ ಆಹ್ವಾನಿತ ಕಲಾವಿದರುಗಳ ಚಿತ್ರಕಲಾ ಪ್ರದರ್ಶನವನ್ನು ಚಿತ್ರಕಲಾ ಪರಿಷತ್ತಿನ 12 ಗ್ಯಾಲರಿಗಳಲ್ಲಿ ಏರ್ಪಡಿಸಲಾಗಿದೆ.

"ಚಿತ್ರಸಂತೆ" ಯು ಕರ್ನಾಟಕ ಚಿತ್ರಕಲಾ ಪರಿಷತ್ತು ಏರ್ಪಡಿಸುವತ್ತ ಬಂದಿರುವ ಅಖಿಲ-ಭಾರತ ಮಟ್ಟದ ಒಂದು ದಿನದ ವಾರ್ಷಿಕ ಕಲಾಸಂತೆಯಾಗಿದೆ. ಕಳೆದ ಹದಿನೇಳು ವರ್ಷಗಳಿಂದ ಇದು ಪರಿಷತ್ತಿನ ಆವರಣದಲ್ಲಿ ಮತ್ತು ಕುಮಾರಕೃಪ ರಸ್ತೆಯಾದ್ಯಂತ ಏರ್ಪಾಡಾಗುತ್ತಾ ಬಂದಿದೆ. ಕರ್ನಾಟಕದಾದ್ಯಂತ ಕಲಾವಿದರಷ್ಟೇ ಅಲ್ಲದೆ ಸಮಗ್ರ ಭಾರತೀಯ ಕಲಾವಿದರೂ ಇದರಲ್ಲಿ ಭಾಗವಹಿಸುವತ್ತ ಬಂದಿರುತ್ತಾರೆ.

ನಿಸ್ವಾರ್ಥ ಕಲಾಸೇವೆಯ ಉದ್ದೇಶದಿಂದ ಕರ್ನಾಟಕ ಚಿತ್ರಕಲಾ ಪರಿಷತ್ತು ಆಯೋಜಿಸುತ್ತ ಬಂದಿರುವ ಚಿತ್ರಸಂತೆಯು ಮುಂಬಾಯಿಯ "ಕಾಲಾಘೋಡ" ಶಾಂತಿನಿಕೇತನದ "ನಂದನ್ ಮೇಳ" ಮತ್ತು ಬರೋಡದ "ಕಲಾಮೇಳ"ಗಳಂತೆ ಪ್ರಸಿದ್ಧ. ಸಮಗ್ರ ಕರ್ನಾಟಕದಾದ್ಯಂತ ಎಲ್ಲಾ ಕಲಾ ಗ್ಯಾಲರಿಗಳನ್ನು ವರ್ಷಾದ್ಯಂತ ಭೇಟಿ ನೀಡುವ ಕಲಾಭಿಮಾನಿಗಳ ಸಂಖ್ಯೆಗಿಂತಲೂ ಈ ಒಂದು ದಿನದ "ಚಿತ್ರಸಂತೆ" ಗೆ ಭೇಟಿ ನೀಡುವ ಪ್ರೇಕ್ಷಕರ ಸಂಖ್ಯೆ ಹೆಚ್ಚಿದೆ. ದಕ್ಷಿಣ ಭಾರತದಲ್ಲಿ ಇದೊಂದು ಅನನ್ಯ ಕಲಾಸಂತೆಯಾಗಿದ್ದು, ಇದು ಓರ್ವ ಕಲಾಭಿಮಾನಿಯನ್ನು ಕಲಾವಿದನನ್ನಾಗಿ ಪರಿವರ್ತಿಸಬಲ್ಲ ಒಂದು ವಿಶೇಷ ಸಂಭ್ರಮ.

ಹೆಚ್ಚು ಜನರಿಗೆ ಕಲೆಯನ್ನು ತಲುಪಿಸುವುದರ ಮೂಲಕ ಕಲಾಭಿಮಾನಗಳ ಬಳಗವನ್ನು ಹೆಚ್ಚಿಸುವುದು.ಅವರುಗಳು ದೃಶ್ಯಾನುಭವದ ಜಗತ್ತನ್ನು ವಿಸ್ತರಿಸುವುದು ಚಿತ್ರಸಂತೆಯ ಮೂಲೋದ್ದೇಶಗಳಲ್ಲೊಂದಾಗಿದೆ ಎಂದು ಚಿತ್ರಕಲಾ ಪರಿಷತ್‌ನ ಪ್ರಕಟಣೆ ತಿಳಿಸಿದೆ.

## ಆನ್‌ಲೈನ್ ಯುವಜನೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಕರೆ

ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):

24ನೇ ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು ಆನ್‌ಲೈನ್ ಮೂಲಕ ಹಮ್ಮಿಕೊಳ್ಳಲಾಗುತ್ತಿದ್ದು ಕರ್ನಾಟಕ ರಾಜ್ಯದ ಯುವ ತಂಡಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಕರೆ ನೀಡಿದ್ದಾರೆ.

ರಾಜ್ಯದಿಂದ ರಾಷ್ಟ್ರ ಮಟ್ಟದ ಯುವಜನೋತ್ಸವದಲ್ಲಿ ಪಾಲ್ಗೊಳ್ಳಲು ಅನುವಾಗುವಂತೆ ರಾಜ್ಯದಲ್ಲಿ ಜಿಲ್ಲಾ ಮತ್ತು ರಾಜ್ಯ ಯುವಜನೋತ್ಸವ ಕಾರ್ಯಕ್ರಮಗಳನ್ನು ಈಗಾಗಲೇ ಆಯೋಜಿಲಾಗಿದೆ.

ಭಾರತ ಸರ್ಕಾರವು ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು 2021ರ ಜನವರಿ 12 ರಿಂದ 16 ರವರೆಗೆ Virtual/hybrid ಮಾಧ್ಯಮದಲ್ಲಿ ಆಯೋಜಿಸುವುದಾಗಿ ತಿಳಿಸಿರುತ್ತಾರೆ.

ಕೋವಿಡ್–19 ಮಾರ್ಗಸೂಚಿಗಳಂತೆ ಎರಡು ಹಂತಗಳಲ್ಲಿ ಯುವಜನೋತ್ಸವವನ್ನು Online and Offline ಮೂಲಕ ಕಾರ್ಯಕ್ರಮಗಳನ್ನು ಭಾರತ ಸರ್ಕಾರವು ರಾಷ್ಟ್ರೀಯ ಯುವಜನೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಿದೆ.

ಯುವಜನೋತ್ಸವದಲ್ಲಿ ಸ್ಪರ್ಧಾತ್ಮಕ ವಿಭಾಗ, ವೈಯಕ್ತಿಕ ವಿಭಾಗ, ಏಕಾಂಕ ನಾಟಕ (ಇಂಗ್ಲೀಷ್ ಅಥವಾ ಹಿಂದಿ ಭಾಷೆಯಲ್ಲಿ ಮಾತ್ರ), ಶಾಸ್ತ್ರೀಯ ಗಾಯನ–1. ಹಿಂದೂಸ್ತಾನಿ ಮತ್ತು 2. ಕರ್ನಾಟಿಕ್, ಶಾಸ್ತ್ರೀಯ ವಾದ್ಯ– 1.ಸಿತಾರ್, 2.ಕೊಳಲು, 3.ತಬಲಾ, 4.ವೀಣೆ, 5.ಮೃದಂಗಂ. ಹಾರ್ಮೋನಿಯಂ (ಲಘು). ಗೀಟಾರ್. ಶಾಸ್ತ್ರೀಯ ನೃತ್ಯ–1.ಮಣಿಪುರ, 2.ಓಡಿಸ್ಸಿ, 3.ಭರತನಾಟ್ಯಂ, 4. ಕಥಕ್, 5. ಕುಚಿಪುಡಿ. ಆಶುಭಾಷಣ. ಸಾಂಘಿಕ ವಿಭಾಗ ಜಾನಪದ ನೃತ್ಯ, ಜಾತಪದ ಗೀತೆ. ಸ್ಪರ್ಧೇತರ ವಿಭಾಗ(ರಾಷ್ಟ್ರೀಯ ಯುಜನೋತ್ಸವದಲ್ಲಿ) ಸಾಹಸೋತ್ಸವ ಸುವಿಚಾರ–ಯುವಜನರು ಮತ್ತು ಗಣ್ಯ ವ್ಯಕ್ತಿಗಳ ಸಂವಾದ– ರಾಷ್ಟ್ರೀಯ ಸೇವಾ ಯೋಜನೆ ಸೇರಿದಂತೆ ಅನೇಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ಯಾಂಕುಗಳಲ್ಲಿ ಕನ್ನಡ ಬಳಕೆ ಕುರಿತು ರಾಜ್ಯಾದ್ಯಂತ ಅಭಿಯಾನ ಕೈಗೊಂಡ ಕನ್ನಡ ಅಭಿವೃದ್ಧಿ ಪ್ರಾಧಿಕಾರ

**ಬೆಂಗಳೂರು, ಡಿಸೆಂಬರ್ 29 (ಕರ್ನಾಟಕ ವಾರ್ತೆ):**

ರಾಜ್ಯದ ಎಲ್ಲಾ ಬ್ಯಾಂಕುಗಳು ಪ್ರಾದೇಶಿಕ ಭಾಷೆಯಲ್ಲಿ ವ್ಯವಹರಿಸುವುದು ಈ ನೆಲದ ಹಕ್ಕೋತ್ತಾಯ ಹಾಗೂ ಕೇಂದ್ರ ಸರ್ಕಾರದ ಭಾಷಾನೀತಿಯಾಗಿದ್ದು, ಎಲ್ಲ ಬ್ಯಾಂಕುಗಳು ಸಂಪೂರ್ಣವಾಗಿ ಕನ್ನಡದಲ್ಲಿಯೇ ಗ್ರಾಹಕ ಸೇವೆಯನ್ನು ನೀಡಬೇಕೆಂದು **ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್. ನಾಗಾಭರಣ** ಅವರು ಆಗ್ರಹಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಗರದ ಟೌನ್ ಹಾಲ್ ಬಳಿಯಿರುವ ರಾಜ್ಯಮಟ್ಟದ ಮಾರ್ಗದರ್ಶಿ ಬ್ಯಾಂಕ್ (ಎಸ್.ಎಲ್.ಬಿ.ಸಿ) ಮುಂಭಾಗದಲ್ಲಿ ಹಮ್ಮಿಕೊಳ್ಳಲಾಗಿದ್ದ "ಬ್ಯಾಂಕುಗಳಲ್ಲಿ ಕನ್ನಡ ಬಳಕೆ" ಕುರಿತಾದ ವಿಶೇಷ ಅಭಿಯಾನವನ್ನು ರಾಜ್ಯ ಮಾರ್ಗದರ್ಶಿ ಬ್ಯಾಂಕಿನ ಮುಖ್ಯಸ್ಥರಿಗೆ ಹಕ್ಕೋತ್ತಾಯದ ಮನವಿಯನ್ನು ವಿತರಿಸುವ ಮೂಲಕ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ನಂತರ ಬ್ಯಾಂಕಿ ಮುಂಭಾಗದಲ್ಲಿ ಘೋಷವಾಕ್ಯಗಳ ಭಿತ್ತಿಪತ್ರಗಳನ್ನು ಪ್ರದರ್ಶಿಸಿ ಮಾತನಾಡಿದ ಪ್ರಾಧಿಕಾರದ ಅಧ್ಯಕ್ಷರು, ಈ ನೆಲದ ನೀತಿಯನ್ನು ಪಾಲಿಸುವುದು ಎಲ್ಲಾ ಬ್ಯಾಂಕುಗಳ ಗುರುತರ ಜವಾಬ್ದಾರಿಯಾಗಿದೆ. ಪ್ರತಿಯೊಬ್ಬರೂ ತಮ್ಮ ಶ್ರಮದ ಹಣದಲ್ಲಿ ಬ್ಯಾಂಕುಗಳಲ್ಲಿ ವ್ಯವಹರಿಸುತ್ತಾರೆ. ಅಂತಹ ಗ್ರಾಹಕರಿಗೆ ಅವರಿಗೆ ಅರ್ಥವಾಗುವ ಭಾಷೆಯಲ್ಲಿ ಸೇವೆ ನೀಡುವುದು ಮತ್ತು ಸರ್ಕಾರದ ನೀತಿ-ನಿಯಮಗಳನ್ನು ಪಾಲಿಸುವುದು ಕಡ್ಡಾಯವಾಗಿದ್ದರೂ ಬಹುತೇಕ ಬ್ಯಾಂಕುಗಳು ನಿಯಮ ಉಲ್ಲಂಘಿಸುವುದು ಸರಿಯಾದ ಕ್ರಮವಲ್ಲ. ಅಲ್ಲದೆ ಕನ್ನಡದ ನೆಲದಲ್ಲಿ ಅನ್ಯಭಾಷೆಗಳನ್ನು ಒತ್ತಾಯಪೂರ್ವಕವಾಗಿ ಹೇರುವುದನ್ನು ಪ್ರಾಧಿಕಾರ ಖಂಡಿಸುತ್ತದೆ ಎಂದು ಹೇಳಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ, ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯರಾದ ಡಾ.ವಿಜಯಲಕ್ಷ್ಮಿ ಬಾಳೆಕುಂದ್ರಿ, ಡಾ.ಅಬ್ದುಲ್ ರೆಹಮಾನ್ ಪಾಷಾ, ಕಾರ್ಯದರ್ಶಿ ಡಾ.ಕೆ.ಮುರಳಿಧರ, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಡಾ.ವೀರಶೆಟ್ಟಿ, ಕನ್ನಡಪರ ಚಿಂತಕರು, ಕನ್ನಡ ಕಾಯಕ ಪಡೆಯ ಸದಸ್ಯರುಗಳು, ಜಿಲ್ಲಾ ಜಾಗೃತಿ ಸಮಿತಿ ಸದಸ್ಯರುಗಳು ಪಾಲ್ಗೊಂಡಿದ್ದರು.

## ರಾಜ್ಯದೆಲ್ಲೆಡೆ ಏಕಕಾಲದಲ್ಲಿ ಅಭಿಯಾನ:

ರಾಜ್ಯದೆಲ್ಲೆಡೆ ಏಕಕಾಲದಲ್ಲಿ ಆಯಾ ಜಿಲ್ಲಾ ಮಾರ್ಗದರ್ಶಿ ಬ್ಯಾಂಕುಗಳ ಮುಂಭಾಗದಲ್ಲಿ ನಡೆದ ಈ ಅಭಿಯಾನದಲ್ಲಿ ಆಯಾ ಜಿಲ್ಲೆಯ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರು, ಪ್ರಾಧಿಕಾರದ ಸದಸ್ಯರು, ಕನ್ನಡ ಕಾಯಕ ಪಡೆಯ ಸ್ವಯಂಸೇವಕರುಗಳು, ಕನ್ನಡಪರ ಚಿಂತರಕರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಬೆಂಗಳೂರಿನ ನಾಲ್ಕು ಕಡೆಗಳಲ್ಲಿ "ಬ್ಯಾಂಕುಗಳಲ್ಲಿ ಕನ್ನಡ ಸೇವೆ" ಕುರಿತಾದ ಅಭಿಯಾನವು ಯಶಸ್ವಿಯಾಗಿ ನಡೆಯಿತು.

ಮೈಸೂರು ಬ್ಯಾಂಕ್ ವೃತ್ತದಲ್ಲಿ ಇರುವ ಎಸ್.ಬಿ.ಐ. ಬ್ಯಾಂಕ್ ಮುಂಭಾಗ ನಡೆದ ಅಭಿಯಾನದ ನೇತೃತ್ವವನ್ನು ಪ್ರಾಧಿಕಾರದ ಸದಸ್ಯರಾದ ಡಾ.ಕಿಶೋರ್, ಮಹಾತ್ಮ ಗಾಂಧಿ (ಎಂ.ಜಜಿ.ರಸ್ತೆ) ರಸ್ತೆಯಲ್ಲಿರುವ ಎಕ್ಸಿಸ್ ಬ್ಯಾಂಕು ಮತ್ತು ಇತರೆ ಬ್ಯಾಂಕುಗಳ ಮುಂಭಾಗದಲ್ಲಿ ನಡೆದ ಅಭಿಯಾನದ ನೇತೃತ್ವವನ್ನು ಕನ್ನಡಪರ ಚಿಂತಕರಾದ ಕನ್ನಡ ಮಂಜು ಅವರುಗಳು ವಹಿಸಿದ್ದರು.

ಕನ್ನಡ ಕಾಯಕ ವರ್ಷಾಚರಣೆಯ ಹಿನ್ನೆಲೆಯಲ್ಲಿ ವಿಶ್ವಮಾನದ ಕುವೆಂಪು ಅವರ ಜನ್ಮದಿನಾಚರಣೆ ಪ್ರಯುಕ್ತ ಇಂದು ನಡೆದ ಅಭಿಯಾನದಲ್ಲಿ ಕನ್ನದಲ್ಲಿಯೇ ನಡೆದರೆ ಬ್ಯಾಂಕಿನ ವ್ಯವಹಾರ; ಶೀಘ್ರವೇ ದೊರಕುವುದು ಸಮಸ್ಯೆಗೆ ಪರಿಹಾರ, ಕನ್ನಡ ಬ್ಯಾಂಕ್ ಕಾಯಕದ ಕೊರಳಲ್ಲಿರಲಿ, ಬೆರಳಲ್ಲಿರಲಿ, ಕರುಳಲ್ಲಿರಲಿ ಎಂಬ ಘೋಷವಾಕ್ಯದ ಭಿತ್ತಿಪತ್ರಗಳು ಗಮನ ಸೆಳೆದವು.

**Karnataka State Pollution Control Board**
**ParisaraBhavan, Bengaluru**
**AQI of the CAAQM stations established in Bengaluru City**
**Date :29.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 122 | Moderate | $PM_{.10}$ |
| 2 | Jayanagar 5th Block, Shalini ground | 190 | Moderate | $PM_{2.5}$ |
| 3 | KAVIKA, Mysore Road | 148 | Moderate | $PM_{.2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 112 | Moderate | $PM_{10}$ |
| 5 | HSR Layout, near Central Silkboard | 140 | Moderate | $PM_{2.5}$ |
| 6 | City Railway Station, Magestic, Bengaluru | 119 | Moderate | $PM_{10}$ |
| 7 | Saneguruvanahalli, NisargaBhavan, KSPCB, Shivanagara | 58 | Satisfactory | $PM_{10}$ |
| 8 | BWSSB, Kadabesanahalli | 125 | Moderate | $PM_{2.5}$ |
| 9 | Peenya | 115 | Moderate | $PM_{2.5}$ |
| 10 | BTM Layout | 84 | Satisfactory | $O_3$ |

| Category (Range) | Possible Health Impacts | Category (Range) | Possible Health Impacts |
|---|---|---|---|

| | | | |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

## ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ

## ಪರಿಸರ ಭವನ, ಬೆಂಗಳೂರು.

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಟಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 29.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 122 | ಸಾಧಾರಣ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 190 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 148 | ಸಾಧಾರಣ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 112 | ಸಾಧಾರಣ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 140 | ಸಾಧಾರಣ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 119 | ಸಾಧಾರಣ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 58 | ತೃಪ್ತಿಕರ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 125 | ಸಾಧಾರಣ | $PM_{2.5}$ |
| 9 | ಪೀಣ್ಯ | 115 | ಸಾಧಾರಣ | $PM_{2.5}$ |
| 10 | ಬಿಟಿಎಂ ಲೇಔಟ್ | 84 | ತೃಪ್ತಿಕರ | $O_3$ |

| **ವರ್ಗ(ಶ್ರೇಣಿ)** | **ಉಂಟಾಗಬಹುದಾದಆರೋಗ್ಯ ಪರಿಣಾಮಗಳು** |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |